11) ಸಾರಿಗೆ ವೆಚ್ಚಗಳು	10558315
12) ಪ್ರಾಯೋಜನಾ ವೆಚ್ಚ	11000000
13) ಕ್ರೀಡಾ ತಾಂತ್ರಿಕ ಸಮಿತಿ ವೆಚ್ಚಗಳು	9071854
ಒಟ್ಟು	**395275976**

ಒಟ್ಟು ವೆಚ್ಚಗಳು

ಮೂಲಭೂತ ಸೌಕರ್ಯಗಳು	1056369595
ಇತರೆ ವೆಚ್ಚಗಳು	395875976
ಒಟ್ಟು	**1451645571**

ರಾಜ್ಯದ ಪ್ರತಿ ತಾಲ್ಲೂಕಿನಲ್ಲಿ ಕ್ರೀಡಾಂಗಣಗಳನ್ನು ನಿರ್ಮಿಸುವುದು.

1327(1834) ಶ್ರೀ ಸಂಪಂಗಿ ಎನ್. (ಬಾಗೇಪಲ್ಲಿ) : ಮಾನ್ಯ ಯುವಜನ ಸೇವೆ ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದ ಪ್ರತಿ ತಾಲ್ಲೂಕಿನಲ್ಲಿ ಮಿನಿ ಕ್ರೀಡಾಂಗಣಗಳನ್ನು ನಿರ್ಮಿಸುವ ಯೋಜನೆ ಸರ್ಕಾರದ ಮುಂದೆ ಇರುವುದು ನಿಜವಲ್ಲವೆ?

ಆ) ಹಾಗಿದ್ದಲ್ಲಿ ಕಳೆದ 3 ವರ್ಷಗಳಲ್ಲಿ ರಾಜ್ಯದ ಯಾವ ಯಾವ ತಾಲ್ಲೂಕುಗಳಲ್ಲಿ ಮಿನಿ ಕ್ರೀಡಾಂಗಣ ನಿರ್ಮಾಣಕ್ಕೆ ಮಂಜೂರಾತಿ ನೀಡಲಾಯಿತು,

ಈ ಪೈಕಿ ಯಾವ ಯಾವ ತಾಲ್ಲೂಕಿನಲ್ಲಿ ಮಿನಿ ಕ್ರೀಡಾಂಗಣಗಳನ್ನು ನಿರ್ಮಿಸಲಾಗಿದೆ. ಇದಕ್ಕೆ ವೆಚ್ಚವಾಗಿರುವ ಹಣವೆಷ್ಟು?

ಇ) ಪ್ರಸಕ್ತ ಸಾಲಿನಲ್ಲಿ ಯಾವ ಯಾವ ತಾಲ್ಲೂಕಿನಲ್ಲಿ ಮಿನಿ ಕ್ರೀಡಾಂಗಣಗಳನ್ನು ನಿರ್ಮಿಸುವ ಯೋಜನೆ ಸರ್ಕಾರದ ಮುಂದಿದೆಯೇ?

ಈ) ಯುವಜನರಿಗೆ ಹಾಗೂ ಯುವ ಕ್ರೀಡಾಪಟುಗಳಿಗೆ ಉತ್ತೇಜನ ನೀಡುವ ದೃಷ್ಟಿಯಿಂದ ಪ್ರತಿ ತಾಲ್ಲೂಕಿನಲ್ಲಿ ಒಂದೊಂದು ಕ್ರೀಡಾಂಗಣಗಳನ್ನು ನಿರ್ಮಿಸಲಾಗುವುದೇ?

ಶ್ರೀ ಎಸ್.ಎಸ್. ಮಲ್ಲಿಕಾರ್ಜುನ (ಯುವಜನ ಸೇವೆ ಹಾಗೂ ಕ್ರೀಡಾ ರಾಜ್ಯ ಸಚಿವರು) :

ಅ) ರಾಜ್ಯದ ಪ್ರತಿ ತಾಲ್ಲೂಕಿನಲ್ಲಿ ಕ್ರೀಡಾಂಗಣ ನಿರ್ಮಿಸುವ ಯೋಜನೆ ಸರ್ಕಾರದ ಮುಂದೆ ಇದೆ. ಆದರೆ ಪ್ರತಿ ತಾಲ್ಲೂಕಿನಲ್ಲಿ ಮಿನಿ ಕ್ರೀಡಾಂಗಣ ನಿರ್ಮಾಣ ಮಾಡುವ ಯೋಜನೆ ಇಲ್ಲ.

ಆ) ರಾಜ್ಯದ ಪ್ರತಿ ತಾಲ್ಲೂಕಿನಲ್ಲಿ ಮಿನಿ ಕ್ರೀಡಾಂಗಣ ನಿರ್ಮಿಸುವ ಯೋಜನೆ ಇರುವುದಿಲ್ಲ. **ಆದರೆ ಪ್ರತಿ ತಾಲ್ಲೂಕಿಗೆ ಒಂದು ಕ್ರೀಡಾಂಗಣ ನಿರ್ಮಿಸುವ ಯೋಜನೆ ಹಮ್ಮಿಕೊಳ್ಳಲಾಗಿದೆ. ಕಳೆದ 3 ವರ್ಷಗಳಲ್ಲಿ ಈ ಕೆಳಗಿನ 13 ತಾಲ್ಲೂಕಿ ಕ್ರೀಡಾಂಗಣ ನಿರ್ಮಾಣಕ್ಕಾಗಿ ಮಂಜೂರಾತಿ ನೀಡಲಾಯಿತು.**

1996-97:	ಚಳ್ಳಕೆರೆ, ಚನ್ನರಾಯಪಟ್ಟಣ, ದಾಂಡೇಲಿ.
1997-98:	ಹಿರಿಯೂರು ನಂಜನಗೂಡು ಶಹಪುರ ಚಿಂಚೋಳಿ ಸಿಂಧನೂರು ಬಂಗಾರಪೇಟೆ
1998-99:	ಶ್ರೀರಂಗಪಟ್ಟಣ ಹೂವಿನಹಡಗಲಿ ಬಸವಕಲ್ಯಾಣ ಔರಾದ್

ಮೇಲಿನ 13 ಕ್ರೀಡಾಂಗಣಗಳ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದ್ದು, ಯಾವುದೇ ಕ್ರೀಡಾಂಗಣದ ನಿರ್ಮಾಣ ಕಾರ್ಯ ಪೂರ್ಣಗೊಂಡಿಲ್ಲ. ಈ 13 ಕ್ರೀಡಾಂಗಣಗಳ ನಿರ್ಮಾಣಕ್ಕಾಗಿ ಇದುವರೆಗೆ ಒಟ್ಟು ರೂ. 84.27 ಲಕ್ಷಗಳ ವೆಚ್ಚ ಭರಿಸಿದೆ.

ಇ) ಪ್ರಸಕ್ತ ಸಾಲಿನಲ್ಲಿ ಅಂದರೆ 1999-2000ದಲ್ಲಿ ಶಿವಮೊಗ್ಗ ಜಿಲ್ಲೆಯ ಕುಂಸಿ ಹಾಗೂ ದಾವಣಗೆರೆ ಜಿಲ್ಲೆಯ ಹರಿಹರದಲ್ಲಿ ಕ್ರೀಡಾಂಗಣ ನಿರ್ಮಿಸಲು ಸರ್ಕಾರದ ಮಂಜೂರಾತಿ ದೊರತಿದೆ.

ಈ) ಹೌದು. ಪ್ರತಿ ತಾಲ್ಲೂಕಿನಲ್ಲಿ ಒಂದೊಂದು ಕ್ರೀಡಾಂಗಣಗಳನ್ನು ನಿರ್ಮಿಸುವ ಯೋಜನೆ ಇದೆ.

ರಾಜ್ಯಾದ್ಯಂತ ಕಂಬಳ ಕ್ರೀಡಾಂಗಣ

1330 (1526) ಶ್ರೀ ಕೆ.ಎನ್.ಸುಬ್ಬಾರೆಡ್ಡಿ (ಬಸವನಗುಡಿ) : ಮಾನ್ಯ ಯುವಜನ ಸೇವೆಗಳು ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯಾದ್ಯಂತ ಸರ್ಕಾರಕ್ಕೆ ಕಂಬಳ ಕ್ರೀಡಾಂಗಣವನ್ನು ಸ್ಥಾಪಿಸುವ ಉದ್ದೇಶವಿದೆಯೇ?

ಶ್ರೀ ಎಸ್.ಎಸ್. ಮಲ್ಲಿಕಾರ್ಜುನ್ (ಯುವಜನ ಸೇವೆ ಹಾಗೂ ಕ್ರೀಡಾ ರಾಜ್ಯ ಸಚಿವರು) :

ಅ) ಇಲ್ಲ.

ಪಶು ಆಸ್ಪತ್ರೆಗಳಿಗೆ ಅವಶ್ಯಕವಿರುವಷ್ಟು ಔಷಧಿಗಳ

1333(1529) ಶ್ರೀ ಕೆ.ಎನ್.ಸುಬ್ಬಾರೆಡ್ಡಿ (ಬಸವನಗುಡಿ) : ಮಾನ್ಯ ಪಶುಸಂಗೋಪನಾ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?